RNU AIR DHARWAD

**APRIL 03, 2025**

**AKASHAVANI - DHARWAD**

**PRADESH SAAMACHARA (KANNADA) 12.00 P.M.**

<><><>

ಹುಬ್ಬಳ್ಳಿ–ಧಾರವಾಡ ಮಧ್ಯದ, ಷಟ್ಪಥ ಬಾಯ್‌ಪಾಸ್ ರಸ್ತೆ ನಿರ್ಮಾಣ ಸೇರಿದಂತೆ, ಕರ್ನಾಟಕದಲ್ಲಿ ರಾಷ್ಟ್ರೀಯ ಹೆದ್ದಾರಿಗಳ, ಸಂಪರ್ಕ ಜಾಲವನ್ನು ವೃದ್ಧಿಸಲು, ರಾಜ್ಯ ಸರ್ಕಾರ ಅಗತ್ಯ ಸಹಕಾರ ನೀಡಲಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ಅವರನ್ನು ಹೊಸ ದಿಲ್ಲಿಯಲ್ಲಿ ಭೇಟಿ ಮಾಡಿದ ಅವರು, ಬಾಕಿ ಉಳಿದಿರುವ ಹೆದ್ದಾರಿ ಕಾಮಗಾರಿಗಳನ್ನು ಆದಷ್ಟು ಬೇಗ ಪೂರ್ಣಗೊಳಿಸುವಂತೆ ಹಾಗೂ ಶರಾವತಿ ಹಿನ್ನೀರಿನಲ್ಲಿ, ಸಿಂಗಧೂರು ಸೇತುವೆ ನಿರ್ಮಾಣ ಸೇರಿದಂತೆ, 12 ಪ್ರಸ್ತಾವಗಳಿಗೆ ಮಂಜೂರಾತಿ ನೀಡುವಂತೆ ಮನವಿ ಸಲ್ಲಿಸಿದರು.

<><><>

ದೇಶದ 81 ಕೋಟಿಗೂ ಹೆಚ್ಚು ಜನರಿಗೆ, ಪ್ರತಿ ತಿಂಗಳು ಉಚಿತ ಆಹಾರ ಧಾನ್ಯವನ್ನು ಕೇಂದ್ರ ವಿತರಿಸುತ್ತಿದೆ; ಇದಕ್ಕಾಗಿ 2 ಲಕ್ಷ 11 ಸಾವಿರ ಕೋಟಿ ರೂಪಾಯಿ ವೆಚ್ಚ ಮಾಡಲಾಗುತ್ತಿದೆ ಎಂದು, ಕೇಂದ್ರ ಆಹಾರ ಮತ್ತು ಸಾರ್ವಜನಿಕ ವಿತರಣೆ ಖಾತೆ ಸಚಿವ ಪ್ರಲ್ಹಾದ ಜೋಶಿ, ಲೋಕಸಭೆಗೆ ತಿಳಿಸಿದ್ದಾರೆ. ಧಾನ್ಯಗಳ ಖರೀದಿ, ರಾಜ್ಯಗಳ ಗೋದಾಮುಗಳಿಗೆ ಪೂರೈಕೆ, ಅಂತಾರಾಜ್ಯ ಸರಬರಾಜು ಕಾರ್ಯಗಳನ್ನು ಕೇಂದ್ರ ನಿಭಾಯಿಸುತ್ತಿದೆ ಎಂದು, ಅವರು ಹೇಳಿದರು.

<><><>

ಬೇಸಿಗೆ ಪ್ರಖರತೆ ಹಿನ್ನೆಲೆ, ಕಲ್ಯಾಣ ಕರ್ನಾಟಕ ಭಾಗದ, ಬೀದರ, ಕಲಬುರಗಿ, ಯಾದಗಿರಿ, ರಾಯಚೂರು, ಬಳ್ಳಾರಿ, ವಿಜಯನಗರ ಹಾಗೂ ಕಿತ್ತೂರು ಕರ್ನಾಟಕದ ಬೆಳಗಾವಿ ವಿಭಾಗದ, ವಿಜಯಪುರ ಮತ್ತು ಬಾಗಲಕೋಟೆ ಸೇರಿ, ಒಂಬತ್ತು ಜಿಲ್ಲೆಗಳಲ್ಲಿ, ಮುಂದಿನ ಎರಡು ತಿಂಗಳ ಕಾಲ, ಸರ್ಕಾರಿ ಕಚೇರಿಗಳ, ಕಾರ್ಯನಿರ್ವಹಣೆ ವೇಳೆ ಬದಲಿಸಿ, ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಬೆಳಗ್ಗೆ 8 ರಿಂದ ಮಧ್ಯಾಹ್ನ 1.30ರ ವರೆಗೆ ಕಚೇರಿಗಳು ಕಾರ್ಯನಿರ್ವಹಿಸಲಿವೆ.

<><><>

ವಿಜಯನಗರ ಜಿಲ್ಲೆಯ, ಹಂಪಿ ಕನ್ನಡ ವಿಶ್ವವಿದ್ಯಾಲಯದ, 33ನೇ ಘಟಿಕೋತ್ಸವ, 'ನುಡಿ ಹಬ್ಬ', ನಾಳೆ ಸಂಜೆ, 6.30 ಕ್ಕೆ, ವಿಶ್ವವಿದ್ಯಾಲಯದ ನವರಂಗ ಬಯಲು ರಂಗಮಂದಿರದಲ್ಲಿ ಜರುಗಲಿದೆ. ರಾಜ್ಯಪಾಲ ಹಾಗೂ ಕುಲಾಧಿಪತಿ ಥಾವರಚಂದ್ ಗೆಹ್ಲೋಟ್, ಪುರಸ್ಕಾರ ಹಾಗೂ ಪದವಿಗಳನ್ನು ಪ್ರದಾನಿಸಲಿದ್ದಾರೆ, ಎಂದು, ಉಪ ಕುಲಪತಿ ಡಿ.ವಿ. ಪರಮಶಿವಮೂರ್ತಿ, ತಿಳಿಸಿದ್ದಾರೆ. ನಾಡೋಜ ಗೌರವಕ್ಕೆ ಭಾಜನರಾದ, ಸಾಹಿತಿ, ಕೊಟ್ಟೂರಿನ ಕುಂ.ವೀರಭದ್ರಪ್ಪ ಪ್ರದೇಶ ಸಮಾಚಾರಕ್ಕಾಗಿ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ಕುಂ. ವೀರಭದ್ರಪ್ಪ ಧ್ವನಿ 33 ಸೆಕೆಂದುಗಳು

<><><>

ಮಹಾತ್ಮ ಗಾಂಧಿಜಿಯವರ ಗ್ರಾಮ ಸ್ವರಾಜ್ಯದ ಕನಸನ್ನು ನನಸು ಮಾಡುವ ಮೂಲಕ ಮೈಸೂರು ತಾಲ್ಲೂಕಿನ ದೊಡ್ಡಮಾರಗೌಡನಹಳ್ಳಿ ಗ್ರಾಮ ಪಂಚಾಯಿತಿ 2ನೇ ಬಾರಿಗೆ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಭಾಜನವಾಗಿದೆ. ಪಂಚಾಯಿತಿ ವ್ಯಾಪ್ತಿಯ ಐದು ಕೆರೆಗಳ ಅಭಿವೃದ್ಧಿ, ಅಂಗನವಾಡಿ ಕೇಂದ್ರಗಳ ಅಭಿವೃದ್ಧಿ, ಪ್ರತಿ ಶಾಲೆಯಲ್ಲಿ ಡಿಜಿಟಲ್ ಲೈಬ್ರರಿ ಸ್ಥಾಪನೆ ಮತ್ತು ನಿರ್ವಹಣೆ, ಸೇರಿದಂತೆ ಮನ್ರೇಗಾದಲ್ಲಿನ ವಿಶೇ ’ ಸಾಧನೆ ಪರಿಗಣಿಸಿ ರಾಜ್ಯ ಸರ್ಕಾರ 2ನೇ ಬಾರಿಗೆ ಗಾಂಧಿ ಗ್ರಾಮ ಪುರಸ್ಕಾರ ನೀಡಿದೆ. 2013–14 ನೇ ಸಾಲಿನಲ್ಲಿ ಈ ಪಂಚಾಯಿತಿ ಪ್ರಥಮ ಬಾರಿಗೆ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಭಾಜನವಾಗಿತ್ತು.

<><><>

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಗದಗ ಜಿಲ್ಲೆ, ಮುಂಡರಗಿಯ ಎ.ಪಿ.ಎಂ.ಸಿ. ಪ್ರಾಂಗಣದಲ್ಲಿ, ಭತ್ತ ಖರೀದಿ ಕೇಂದ್ರ ತೆರೆಯಲಾಗುವುದು ಎಂದು, ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ ತಿಳಿಸಿದ್ದಾರೆ. ಪ್ರತಿ ಕ್ವಿಂಟಾಲ್ ಸಾಮಾನ್ಯ ಭತ್ತಕ್ಕೆ 2 ಸಾವಿರದ 300 ರೂಪಾಯಿ, ‘ಎ’ ಶ್ರೇಣಿ ಭತ್ತಕ್ಕೆ, 2 ಸಾವಿರದ 320 ರೂಪಾಯಿ, ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ಪ್ರತಿ ರೈತರಿಂದ, ಪ್ರತಿ ಎಕರೆಗೆ 25 ಕ್ವಿಂಟಾಲ್‌ನಂತೆ, ಗರಿ ್ಟ 50 ಕ್ವಿಂಟಾಲ್ ಭತ್ತ ಖರೀದಿಸಲು ಸೂಚಿಸಲಾಗಿದೆ.

<><><>

ಉಡುಪಿ ನಗರ ಹಾಗೂ ಮಣಿಪಾಲ ರಸ್ತೆ ಬಳಿಯ ಇಂದ್ರಾಳಿ ರೈಲ್ವೇ ಮೇಲ್ಸೇತುವೆ ನಿರ್ಮಾಣದ ಅಂತಿಮ ಘಟ್ಟದ ಕಾಮಗಾರಿಗಳನ್ನು ಕೈಗೊಳ್ಳಲು ಎಲ್ಲಾ ರೀತಿಯ ಅಗತ್ಯ ಸಿದ್ಧತೆಗಳನ್ನು ಮಾಡಿಕೊಂಡು ಶೀಘ್ರ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಕೆ.ವಿದ್ಯಾಕುಮಾರಿ ಸೂಚನೆ ನೀಡಿದ್ದಾರೆ. ಉಡುಪಿ ನಗರ ಹಾಗೂ ಮಣಿಪಾಲ್ ರಸ್ತೆಯ ಇಂದ್ರಾಳಿ ಸಮೀಪದ ರೈಲ್ವೇ ಮೇಲ್ಸೇತುವೆ ಅಭಿವೃದ್ಧಿ ಕಾಮಗಾರಿ ಪರಿಶೀಲಿಸಿದ ಅವರು, ರೈಲ್ವೇ ಮೇಲ್ಸೇತುವೆಯಾಗಿ ಕಬ್ಬಿಣದ ಗರ್ಡರ್ ನಿರ್ಮಾಣದ ವೆಲ್ಡಿಂಗ್ ಕಾಮಗಾರಿ ಈಗಾಗಲೇ ಪೂರ್ಣಗೊಂಡಿದ್ದು, ರೈಲ್ವೆ ಇಲಾಖೆ ವತಿಯಿಂದ ವೆಲ್ಡಿಂಗ್ ಕಾರ್ಯದ ಗುಣಮಟ್ಟವನ್ನು ಸ್ಥಳೀಯವಾಗಿ ಪರಿಶೀಲನೆ ನಡೆಸಲಾಗಿದೆ. ಅಂತಿಮವಾಗಿ ರೈಲ್ವೇ ಡಿಸೈನ್ ಮತ್ತು ಸೇಫ್ಟಿ ಆರ್ಗನೈಸೇ ’ನ್ ಲಕ್ನೋ ಅವರಿಂದ ತ್ವರಿತವಾಗಿ ಪರಿಶೀಲನೆ ಕೈಗೊಳ್ಳಬೇಕು ಎಂದು ಸೂಚಿಸಿದರು.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.

<><><><><>